<u>ಅಸಲು ದಾವಾ ಸಂಖ್ಯೆಃ **- 157/2021**</u> **ಪಿ.ಡಬ್ಲ್ಯೂ:-1**

ದಿನಾಂಕಃ **06-11-2024** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಮುಂದುವರೆದ ಪಾಟೀ ಸವಾಲು :- ಪ್ರತಿವಾದಿ ಪರ ವಕೀಲರಿಂದ :-</u>

1 ನೇ ಪ್ರತಿವಾದಿ ನನ್ನ ವಿರುದ್ಧ ದಾವೆಯನ್ನು ಸಲ್ಲಿಸಿದ್ದಾರೆ ಆದರೆ ಸದರಿ ದಾವೆಯನ್ನು ಯಾವ ವಿಚಾರಕ್ಕೆ ಸಲ್ಲಿಸಿದ್ದಾರೆ ಎಂಬ ವಿಚಾರ ನನಗೆ ಗೊತ್ತಿಲ್ಲ. 1 ನೇ ಪ್ರತಿವಾದಿಯು ನನ್ನ, ನನ್ನ ಗಂಡ ಹಾಲೇಶಪ್ಪ, ನನ್ನ ಮಾವ ಆನಂದಪ್ಪ, ಮೈನಮ್ಮ, ಅಭಿಶೇಕ್ ಮತ್ತು ಭಾಗ್ಯರವರ ಮೇಲೆ ದಾವೆಯನ್ನು ಸಲ್ಲಿಸಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ಸದರಿ ದಾವೆಯಲ್ಲಿ ವಕೀಲರನ್ನು ನೇಮಕ ಮಾಡಿಕೊಂಡಿರುವ ಬಗ್ಗೆ ನನ್ನ ಯಜಮಾನ ಮತ್ತು ಮಾವನವರಿಗೆ ಗೊತ್ತು. ನನಗೆ ಗೊತ್ತಿಲ್ಲ. ಸದರಿ ದಾವೆಯು ಇದೇ ನ್ಯಾಯಾಲಯದಲ್ಲಿ ಚಾಲ್ತಿಯಲ್ಲಿರಬಹುದು. ಅಸಲು ದಾವಾ ನಂ.307/2021 ಎಂದರೆ ನನಗೆ ಗೊತ್ತಿಲ್ಲ. 1 ನೇ ಪ್ರತಿವಾದಿಯು ಈ ದಾವೆಯ ದಾವಾ ಆಸ್ತಿಯ ಜೊತೆಗೆ ಇನ್ನೆರಡು ಆಸ್ತಿಗಳನ್ನು ಸೇರಿಸಿ, ಸದರಿ ದಾವೆಯನ್ನು ಸಲ್ಲಿಸಿದ್ದಾರೆ ಎಂದರೆ ಸರಿ. ಸರ್ವೇ ನಂ.46/5 ರಲ್ಲಿ 1 ಎಕರೆ 18 ಗುಂಟೆ ಜಮೀನು, ಸರ್ವೇ ನಂ.108/6 ರಲ್ಲಿ 2 ಎಕರೆ 11 ಗುಂಟೆ ಜಮೀನು ಆರುಂಡಿ ಗ್ರಾಮದಲ್ಲಿ ಇದೆ ಎಂದರೆ ಸರಿ. ದಾವಾ ಆಸ್ತಿಯು ಸೊರಟೂರು ಗ್ರಾಮದಲ್ಲಿ ಇದೆ ಎಂದರೆ ಸರಿ. ಈ ದಾವೆಯ ದಾವಾ ಆಸ್ತಿ ಮತ್ತು ಮೇಲ್ಕಂಡ ಆಸ್ತಿಗಳು ಒಟ್ಟು ಕುಟುಂಬದ ಆಸ್ತಿಗಳು ಎಂದರೆ ಸರಿಯಲ್ಲ. ಮೇಲ್ಕಂಡ ಜಮೀನುಗಳ ಆದಾಯದಿಂದ ಬಂದಂತಹ ಹಣದಿಂದ ದಾವಾ ಆಸ್ತಿಯನ್ನು ನಮ್ಮ ಮಾವ ಆನಂದಪ್ಪರವರು ಖರೀದಿ ಮಾಡಿದ್ದಾರೆ ಎಂದರೆ ಸರಿಯಲ್ಲ.

ಮುಂದುವರೆದ ಪಾಟೀ ಸವಾಲಿಗೆ ಕಾಲಾವಕಾಶಕೋರಿದ್ದು, ನೀಡಿ ಮುಂದೂಡಲಾಯಿತು.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.